ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:4/2021

ಚಾಸಾ:4 ಪ್ರಾಸಾ:1

ದಿನಾಂಕ: 07.04.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಜುಬೇರ |
| ತಂದೆಯ ಹೆಸರು | : | ಖಾಧರ್ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ಚಾಲಕ |
| ವಾಸ ಸ್ಥಳ | : | ನಾವುಂದ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ದಿ: 22-05-2020ರ ಘಟನಾ ಸ್ಥಳ ಪಂಚನಾಮೆ, ನಕ್ಷೆ ಹಾಗೂ ಪಿರ್ಯಾದುದಾರರ ಕಾರು ಬಿದ್ದ ಸ್ಥಳದ ಪಂಚನಾಮೆ, ಸ್ವತ್ತು ಸ್ವಾಧೀನತಾ ಪಂಚನಾಮೆಗಳನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಗಳನ್ನು ನಿಪಿ-1 ರಿಂದ 4 ಎಂದು, ಅವುಗಳಲ್ಲಿನ ಸಾಕ್ಷಿಯ ಸಹಿಗಳನ್ನು ನಿಪಿ-1(ಎ) ರಿಂದ 4(ಎ) ಎಂದು ಗುರುತಿಸಲಾಯಿತು. ಸದ್ರಿ ಸಹಿಗಳನ್ನು ಠಾಣೆಯಲ್ಲಿ ಮಾಡಿರುತ್ತೇನೆ. ಸದ್ರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿಗೆ 2 ಪೋಟೋಗಳನ್ನು ತೋರಿಸಲಾಗಿದ್ದು ಅವುಗಳನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿಃ 22-05-2020 ರಂದು ಪೊಲೀಸರು ಪಂಚನಾಮೆ ಜರುಗಿಸಲು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಬೆಳಿಗ್ಗೆ 11 ರಿಂದ 11-30ರವರೆಗೆ ಪಂಚನಾಮೆ ಮತ್ತು ನಕ್ಷೆ ತಯಾರಿಸಿ ಅದೇ ದಿನ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಕಾರು ಬಿದ್ದಿದ್ದ ಬಗ್ಗೆ ಮಧ್ಯಾಹ್ನ 1-45 ರಿಂದ 2-15ರವರೆಗೆ ಹಾಗೂ ಸದ್ರಿ ಕಾರನ್ನು ವಶಕ್ಕೆ ಪಡೆಯುವ ವೇಳೆ ಬೆಳಗ್ಗೆ 9-05 ರಿಂದ 10 ಗಂಟೆಯವರೆಗೆ ನಿಪಿ-1 ರಿಂದ 4ನ್ನು ಜರುಗಿಸಿ ಕೆಎ-20-ಎಂಎ-3933 ವಾಹನವನ್ನು ವಶಕ್ಕೆ ಪಡೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ವೇಳೆಗೆ 3 ಸ್ಥಳಗಳಲ್ಲಿ ಪೋಟೋಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

ಇದೇ ವಿಚಾರವಾಗಿ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಹೇಳಿಕೆಯನ್ನು ನಿಪಿ-7 ಎಂದು ಗುರುತಿಸಲಾಯಿತು. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿತರು ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**